# <u>ಮಂಗಳೂರು ವಿಶ್ವವಿದ್ಯಾನಿಲಯ</u>

ದಿನಾಂಕ 27.02.2023ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2023ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಗಳು.

**ಉಪಸ್ಥಿತರು:**

| **ಕ್ರ.ಸಂ.** | | | **ಸಹಿ** |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ಗಿರಿಧರ ರಾವ್ ಎಂ.ಎಸ್.,<br>ಜಂಟಿ ನಿರ್ದೇಶಕರು<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಶ್ರೀ ರವಿಚಂದ್ರ ಪಿ. ಎಂ. | ಸದಸ್ಯರು | |
| 4. | ಪ್ರೊ. ಜಯರಾಜ್ ಅಮೀನ್<br>ಡೀನರು, ಕಲಾ ನಿಕಾಯ | ಸದಸ್ಯರು | |
| 5. | ಶ್ರೀ ಲೆವಿನ್ ಡಿ'ಸೋಜ | ಸದಸ್ಯರು | |
| 6. | ಶ್ರೀ ಮೋಹನ್ ನಾಯ್ಕ್<br>(Online ಮೂಲಕ) | ಸದಸ್ಯರು | |
| 7. | ಡಾ. ರಾಜೇಂದ್ರ ಎಸ್. ನಾಯಕ್<br>(Online ಮೂಲಕ) | ಸದಸ್ಯರು | |
| 8. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ,<br>ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ | ಸದಸ್ಯರು | |
| 9. | ಪ್ರೊ. ರಾಜುಕೃಷ್ಣ ಚಲಣ್ಣವರ್<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 10. | ಪ್ರೊ. ವೈ. ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 11. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

- **ಸ್ವಾಗತ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 18(2)ರ ಪ್ರಕಾರ ಸರಕಾರದ ಅಧಿಸೂಚನೆ ಸಂಖ್ಯೆ:ಇಡಿ 93 ಯುಡಿವಿ 2022 ದಿನಾಂಕ 15.02.2023 ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ) ರಾಗಿ ನೇಮಕಗೊಂಡಿರುವ ಡಾ. ರಾಜುಕೃಷ್ಣ ಚಲ್ಲಣ್ಣವರ್, ಪ್ರಾಧ್ಯಾಪಕರು, ಸ್ನಾತಕೋತ್ತರ ಆನ್ವಯಿಕ ಸಸ್ಯಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

- **ಕೃತಜ್ಞತೆ:**

I. ದಿನಾಂಕ 16.03.2020ರಿಂದ ಅನ್ವಯವಾಗುವಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ)ರಾಗಿ ಕಾರ್ಯ ನಿರ್ವಹಿಸುತ್ತಿದ್ದ ಪ್ರೊ.ಪಿ.ಎಲ್.ಧರ್ಮ, ಇವರನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 93 ಯುಡಿವಿ 2022 ದಿನಾಂಕ 15.02.2023ರ ಪ್ರಕಾರ ಕುಲಸಚಿವರು (ಪರೀಕ್ಷಾಂಗ) ಜವಾಬ್ದಾರಿಯಿಂದ ಬಿಡುಗಡೆಗೊಳಿಸಿರುವ ವಿಚಾರವನ್ನು ಕುಲಸಚಿವರು ಸಭೆಗೆ ತಿಳಿಸಿದರು.

ಇವರು ತಮ್ಮ ಅಧಿಕಾರದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರಿಗೆ ಸಿಂಡಿಕೇಟ್ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## I. ನಡವಳಿಗಳ ದೃಢೀಕರಣ

1. ದಿನಾಂಕ 31.01.2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

   - **ದೃಢೀಕರಿಸಲಾಯಿತು. –**

**II. ಅನುಸರಣಾ ವರದಿಯ ಅನುಮೋದನೆ**

1. ದಿನಾಂಕ 20.12.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಎಂಟನೇ ಸಾಮಾನ್ಯ ಸಭೆಯ ಅನುಸರಣಾ ವರದಿಯ ಅನುಮೋದನೆ.

   - ಅನುಮೋದಿಸಲಾಯಿತು. -

**ಪ್ರಾಸ್ತಾವಿಕ**

**ಮಾನ್ಯ ಕುಲಪತಿಗಳು ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.**

1. ಮಂಗಳೂರು ವಿಶ್ವವಿದ್ಯಾನಿಲಯದ 41ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವನ್ನು ದಿನಾಂಕ 15.03.2023ರಂದು ವಿಶ್ವವಿದ್ಯಾನಿಲಯದ ಮಂಗಳ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದು, ಕರ್ನಾಟಕ ರಾಜ್ಯದ ರಾಜ್ಯಪಾಲರು ಹಾಗೂ ಗೌರವಾನ್ವಿತ ಕುಲಾಧಿಪತಿಗಳಾದ ಶ್ರೀ ಥಾವರ್ ಚಂದ್ ಗೆಹ್ಲೋಟ್, ಇವರು ಸಮಾರಂಭದ ಅಧ್ಯಕ್ಷತೆ ವಹಿಸಲಿರುವರು. ಸದರಿ ಸಮಾರಂಭಕ್ಕೆ ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾನಿಲಯದ ಸಹ ಕುಲಾಧಿಪತಿಗಳಾದ ಡಾ. ಅಶ್ವಥ್‌ನಾರಾಯಣ್ ಸಿ.ಎನ್. ಇವರು ಆಗಮಿಸಲಿರುವರು. ಮುಖ್ಯ ಅತಿಥಿಗಳಾಗಿ ಡಾ. ಎಸ್. ಸಿ. ಶರ್ಮ, ನಿರ್ದೇಶಕರು, ರಾಷ್ಟ್ರೀಯ ಮೌಲ್ಯೀಕರಣ ಮತ್ತು ಮಾನ್ಯತಾ ಪರಿಷತ್ತು, ಬೆಂಗಳೂರು ಇವರು ಘಟಿಕೋತ್ಸವ ಭಾಷಣ ಮಾಡಲಿರುವ ವಿಚಾರವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತರುತ್ತಾ, ಸದರಿ ಸಮಾರಂಭಕ್ಕೆ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಆತ್ಮೀಯವಾಗಿ ಆಹ್ವಾನಿಸಿದರು.

2. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಸ್ವಾಮಿ ವಿವೇಕಾನಂದರ ಪುತ್ಥಳಿ ಸ್ಥಾಪನೆಗೆ ಸಂಬಂಧಿಸಿದ ಟೆಂಡರು ಪ್ರಕ್ರಿಯೆ ನಡೆಸಿದ್ದು, ತಾಂತ್ರಿಕ ಸಮಿತಿ ಹಾಗೂ ಖರೀದಿ ಸಮಿತಿ ಸಭೆಗೆ ಪ್ರಸ್ತಾವನೆಯನ್ನು ಮಂಡಿಸಿ, ನಂತರ ಸಿಂಡಿಕೇಟು ಸಭೆಗೆ ಕಾರ್ಯಸೂಚಿ ಮಂಡಿಸಲಾಗುವುದು ಎಂಬ ವಿಷಯವನ್ನು ಕುಲಸಚಿವರು ಸಭೆಗೆ ತಿಳಿಸಿದರು.

3. ವಿಶ್ವವಿದ್ಯಾನಿಲಯದ ಕೆಲವು ಪ್ರಾಧ್ಯಾಪಕರು ನಿವೃತ್ತಿ ವಯಸ್ಸನ್ನು 62 ರಿಂದ 65 ಕ್ಕೆ ಏರಿಸುವ ಬಗ್ಗೆ ಮಾನ್ಯ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲದಲ್ಲಿ ದಾವೆ ಹೂಡಿದ್ದು, ದಿನಾಂಕ 17.02.2023ರ ನ್ಯಾಯಾಲಯದ ಆದೇಶದನ್ವಯ ಈ ಕಚೇರಿ ಆದೇಶ ದಿನಾಂಕ 23.02.2023ರಲ್ಲಿ ಡಾ. ಅರಬಿ ಯು., ಪ್ರಾಧ್ಯಾಪಕರು ಮತ್ತು ಡಾ. ಎಸ್. ಎಂ. ಧರ್ಮಪ್ರಕಾಶ್, ಪ್ರಾಧ್ಯಾಪಕರು ಇವರುಗಳನ್ನು ವಿಶ್ವವಿದ್ಯಾನಿಲಯದ ಸೇವೆಯಿಂದ ಬಿಡುಗಡೆಗೊಳಿಸಲಾಗಿರುವ ವಿಷಯವನ್ನು ಮಾನ್ಯ ಕುಲಸಚಿವರು ಸಭೆಗೆ ತಿಳಿಸಿದರು.

4. ಸರಕಾರದ ಪತ್ರ ಸಂಖ್ಯೆ: ಇಡಿ 31 ಯುಡಿವಿ 2022 ದಿನಾಂಕ 31.01.2023 ರಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ / ಹೊರಗುತ್ತಿಗೆ ನೆಲೆಯಲ್ಲಿ ಬೋಧಕೇತರ ಸಿಬ್ಬಂದಿಗಳ

ಸೇವೆಯನ್ನು ಬಳಸಿಕೊಂಡಿರುವುದಕ್ಕೆ ವರದಿ ಸಲ್ಲಿಸುವಂತೆ ತಿಳಿಸಲಾಗಿರುತ್ತದೆ. ಮುಂದುವರಿದು, ಸಂಬಂಧಿತ ಅಧಿಕಾರಿ / ನೌಕರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆಯೂ ಸದರಿ ಪತ್ರದಲ್ಲಿ ತಿಳಿಸಿರುವ ವಿಚಾರವನ್ನು ಕುಲಸಚಿವರು ಸಭೆಯ ಗಮನಕ್ಕೆ ತರುತ್ತಾ ಈ ಬಗ್ಗೆ ಸರಕಾರಕ್ಕೆ ವರದಿಯನ್ನು ಸಲ್ಲಿಸುವುದಾಗಿ ತಿಳಿಸಿದರು.

5. ಸರಕಾರದ ಪತ್ರ ಸಂಖ್ಯೆ: ಇಡಿ 129 ಯುಡಿವಿ 2017 ದಿನಾಂಕ 07.02.2023 ರಲ್ಲಿ 2016-17 ನೇ ಸಾಲಿನ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರ (ಸಾಮಾನ್ಯ ಮತ್ತು ಸಾಮಾಜಿಕ ವಲಯ) ವರದಿಯಲ್ಲಿನ ಬೋಧನಾ ಸಿಬ್ಬಂದಿ ನೇಮಕಾತಿ, ಪದೋನ್ನತಿ ಹಾಗೂ ವೇತನ ನಿಗದಿಯ ವಿಷಯಾಧಾರಿತ ಲೆಕ್ಕ ಪರಿಶೋಧನಾ ಕಂಡಿಕೆಗೆ ಸಂಬಂಧಿಸಿ, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಹಾಗೂ ಸಂಬಂಧಿತರಿಂದ ವಸೂಲಾತಿ ಬಗ್ಗೆ ಕ್ರಮವಹಿಸಿ ಸರಕಾರಕ್ಕೆ ವರದಿ ಸಲ್ಲಿಸುವಂತೆಯೂ ತಿಳಿಸಿರುವುದನ್ನು ಸಭೆಯ ಗಮನಕ್ಕೆ ತರುತ್ತಾ ಈ ಬಗ್ಗೆ ಸರಕಾರಕ್ಕೆ ವರದಿಯನ್ನು ಸಲ್ಲಿಸುವುದಾಗಿ ತಿಳಿಸಿದರು.

**6.** ಘನತೆವೆತ್ತ ರಾಜ್ಯಪಾಲರ ಸಚಿವಾಲಯದ ಸುತ್ತೋಲೆ ದಿನಾಂಕ 27.10.2021ರನ್ವಯ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಸ್ತಿತ್ವದಲ್ಲಿರುವ ಪರಿನಿಯಮ "Statute Governing Rules of Business of the Syndicate, The Academic Council, The Finance Committee and The Faculties"ಕ್ಕೆ ತಿದ್ದುಪಡಿಯನ್ನು ಅಳವಡಿಸಿಕೊಂಡು ಗೌರವಾನ್ವಿತ ಕುಲಾಧಿಪತಿಗಳ ಅಂಕಿತಕ್ಕಾಗಿ ಸರಕಾರಕ್ಕೆ ಈಗಾಗಲೇ ಸಲ್ಲಿಸಲಾಗಿತ್ತು. ಪ್ರಸ್ತುತ ಸರಕಾರದ ಪತ್ರ ಸಂಖ್ಯೆ ಇಡಿ 14 ಯುಡಿಎಸ್ 2022 ದಿನಾಂಕ 18.01.2023ರಲ್ಲಿ ಸದರಿ ವಿಷಯಕ್ಕೆ ಸಂಬಂಧಿಸಿ, ವಿಶ್ವವಿದ್ಯಾನಿಲಯದ ಹಂತದಲ್ಲಿಯೇ ಮಾರ್ಗಸೂಚಿಗಳನ್ನು ತಯಾರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂಬುದಾಗಿ ತಿಳಿಸಿರುವ ವಿಚಾರವನ್ನು ಸಭೆಯ ಗಮನಕ್ಕೆ ತರುತ್ತಾ ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

## III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.2:1 (2023)**

ವಿಷಯ: Financial Education and Investment Awareness ಕೌಶಲ್ಯ ವರ್ಧಕ ಕೋರ್ಸಿಗೆ ನೋಂದಣಿಯಾದ ವಿದ್ಯಾರ್ಥಿಗಳಿಗೆ ವಿಧಿಸಿರುವ ಶುಲ್ಕ ಪಾವತಿ ಬಗ್ಗೆ.

ನಿರ್ಣಯ: ಪ್ರಸ್ತಾವನೆಗೆ ಸಂಬಂಧಿಸಿ, ರಾಜ್ಯದ ಇತರ ವಿಶ್ವವಿದ್ಯಾನಿಲಯಗಳ ಮಾಹಿತಿಯನ್ನು ಪಡೆದುಕೊಂಡು ಸಮಗ್ರ ಮಾಹಿತಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಸಾ.ಸ.2:2 (2023)**

ವಿಷಯ: ಶ್ರೀ ಎಸ್.ಎಸ್. ನಾಯಕ್ ಇವರ ಬಿಲ್ಲು ಪಾವತಿ ಮಾಡುವ ಕುರಿತು.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.2:3 (2023)**

ವಿಷಯ: ದಿವಂಗತ ಡಾ. ಕೆ.ಸಿ, ಪುಷ್ಪಲತಾ, ಸಹ ಪ್ರಾಧ್ಯಾಪಕರು ಇವರ ಮರಣ ಉಪದಾನ ಸೌಲಭ್ಯವನ್ನು ಇತ್ಯರ್ಥಪಡಿಸುವ ಬಗ್ಗೆ.

ನಿರ್ಣಯ: ನಿಯಮಾನುಸಾರವಾಗಿ ಪರಿಶೀಲಿಸಿ, ಶೀಘ್ರದಲ್ಲಿ ಮರಣ ಉಪದಾನದ ಮೊತ್ತವನ್ನು ಸಂಬಂಧಿತರಿಗೆ ಪಾವತಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಿ, ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ:ಸಾ.ಸ.2:4 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣ, ಮಂಗಳಗಂಗೋತ್ರಿ, ಘಟಕ ಕಾಲೇಜುಗಳು ಹಾಗೂ ಸ್ನಾತಕೋತ್ತರ ಕೇಂದ್ರ, ಜ್ಞಾನ ಕಾವೇರಿ, ಚಿಕ್ಕ ಅಳುವಾರ ಇಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಭದ್ರತಾ, ಶುಚಿತ್ವ, ತೋಟಗಾರಿಕಾ ಹಾಗೂ 'ಡಿ' ಗ್ರೂಪ್ ಸಿಬ್ಬಂದಿಗಳ ಸೇವೆಯ ಗುತ್ತಿಗೆಯನ್ನು ವಹಿಸಿಕೊಂಡಿರುವ ಶ್ರೀ ರಂಗನಾಥ ಎಂಟರ್‌ಪ್ರೈಸಸ್, ಮೈಸೂರು ಸಂಸ್ಥೆಯ ಗುತ್ತಿಗೆ ಅವಧಿ ಮುಗಿಯಲಿದ್ದು, ಹೊಸ ಗುತ್ತಿಗೆದಾರರ ಆಯ್ಕೆ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಸದರಿಯವರ ಗುತ್ತಿಗೆ ಅವಧಿ ವಿಸ್ತರಣೆ ಮಾಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಪ್ರಸ್ತುತ ಇ-ಟೆಂಡರ್ ಪ್ರಕ್ರಿಯೆಗೆ ಸಮಯಾವಕಾಶದ ಅಗತ್ಯವಿರುವುದರಿಂದ ದಿನಾಂಕ 31.03.2023 ವರೆಗೆ ಅಥವಾ ಟೆಂಡರು ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ (ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ) ಈ ಹಿಂದೆ ಮಂಜೂರಾದ ದರ ಮತ್ತು ಷರತ್ತಿನೊಂದಿಗೆ ಹಾಲಿ ಗುತ್ತಿಗೆದಾರರಾದ ಶ್ರೀ ರಂಗನಾಥ ಎಂಟರ್‌ಪ್ರೈಸಸ್, ಮೈಸೂರು ಇವರಿಗೆ ಗುತ್ತಿಗೆಯನ್ನು ಮುಂದುವರಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಮುಂದುವರಿದು, ಇನ್ನು ಮುಂದಕ್ಕೆ ಗುತ್ತಿಗೆ ಅವಧಿ ಅಂತಿಮಗೊಳ್ಳುವ ಸಾಕಷ್ಟು ಸಮಯದ ಮುಂಚಿತವಾಗಿ ಪ್ರಸ್ತಾವನೆಯನ್ನು ಸಿಂಡಿಕೇಟಿಗೆ ಮಂಡಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.2:5 (2023)**

ವಿಷಯ: ಸೆಪ್ಟೆಂಬರ್ / ಅಕ್ಟೋಬರ್ 2022ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ದೂರಶಿಕ್ಷಣದ ಪದವಿ ಪರೀಕ್ಷೆಗಳಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯಾರ್ಥಿಗಳ ಬಗ್ಗೆ ತನಿಖಾ ವರದಿ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.2:6 (2023)**

ವಿಷಯ: ದ್ವಿತೀಯ ಸೆಮಿಸ್ಟರ್‌ನ ರಾಷ್ಟ್ರೀಯ ಶಿಕ್ಷಣ ನೀತಿ 2020ರ BBAKALN 201 – ಕನ್ನಡ ಪ್ರಶ್ನೆಪತ್ರಿಕೆಯಲ್ಲಿ ಉಂಟಾದ ಲೋಪಗಳ ಬಗ್ಗೆ.

ನಿರ್ಣಯ: ಸಮರ್ಪಕ ಮತ್ತು ಸಂಪೂರ್ಣ ದಾಖಲೆಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.2:7 (2023)**

ವಿಷಯ: ಪಿಹೆಚ್.ಡಿ. ಪದವಿ ಪ್ರದಾನ ಮಾಡಿದ ಬಗ್ಗೆ.

ನಿರ್ಣಯ: ಅವಗಾಹನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:8 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ "ದೀನ ದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯ" ಸಂಕೀರ್ಣವನ್ನು ನಿರ್ಮಾಣ ಮಾಡಲು ಜಮೀನು ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:9 (2023)**

ವಿಷಯ: ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದ NME-ICT ಯೋಜನೆಯಡಿ ಭಾರತ ಸಂಚಾರ ನಿಗಮ (ಲಿ)., (BSNL) ನಿಂದ 1 Gbps Internet Connectivity ಯ ಶುಲ್ಕ ಪಾವತಿ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಆಡಳಿತ:ಸಾ.ಸ.2:10 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರ ಕಛೇರಿಗೆ ಅಗತ್ಯವಿರುವ 800 Ream A4 Size ಹಾಗೂ 600 Ream FS Size ಜೆರಾಕ್ಸ್ ಪೇಪರ್‌ಗಳನ್ನು ಖರೀದಿಸುವ ಕುರಿತು.

ನಿರ್ಣಯ: ದಿನಾಂಕ 22.02.2023ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಆಡಳಿತ.ಸಾ.ಸ.2:11 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಗ್ರಂಥಾಲಯಕ್ಕೆ ಅಗತ್ಯವಿರುವ ಸ್ಮಾರ್ಟ್ ಕಾರ್ಡ್ ಮತ್ತು ಕಲರ್ ರೋಲ್ ರಿಬ್ಬನ್, ಟ್ಯಾಗ್ ಮತ್ತು ಹೋಲ್ಡರ್‌ಗಳನ್ನು ಖರೀದಿಸುವ ಬಗ್ಗೆ.

ನಿರ್ಣಯ: ದಿನಾಂಕ 22.02.2023ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಸಾ.ಸ.2:12 (2023)**

ವಿಷಯ: ಅನ್ವಯಿಕ ಪ್ರಾಣಿಶಾಸ್ತ್ರ ವಿಭಾಗದ Neurogenetics Lab ಹಾಗೂ DBT Ramalingaswami Fellowship ಗೆ ಸಂಬಂಧಿಸಿ ನಡೆದ ಸಭೆಯ ನಡವಳಿ ಅನುಮೋದನೆ ಬಗ್ಗೆ.

ನಿರ್ಣಯ: ದಿನಾಂಕ 13.02.2023ರಂದು ನಡೆದ ಸಭೆಯ ನಡವಳಿಯನ್ನು ಸಿಂಡಿಕೇಟು ಅಂಗೀಕರಿಸಿ, ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಸಾ.ಸ.2:13 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಪ್ರಸಾರಾಂಗದ ಮೂಲಕ ಪದವಿ ಕೋರ್ಸುಗಳ (ಮೂರನೇ ಹಾಗೂ ನಾಲ್ಕನೇ ಚತುರ್ಮಾಸ) ಪಠ್ಯ ಪುಸ್ತಕಗಳನ್ನು ಮುದ್ರಿಸುವ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 22.02.2023ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು:ಸಾ.ಸ.2:14 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರ ನೇಮಕಾತಿ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ ವಿಭಾಗಗಕ್ಕೆ ಡಾ. ರಮೇಶ್ ಎ., ಸಹಾಯಕ ಪ್ರಾಧ್ಯಾಪಕರು ಇವರನ್ನು ದಿನಾಂಕ 30.06.2023ರವರೆಗೆ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ:ಸಾ.ಸ.2:15 (2023)**

ವಿಷಯ: ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಮಂಗಳೂರು ಇವರ ವತಿಯಿಂದ ಆಯೋಜಿಸಿದ 42ನೇ ರಾಜ್ಯ ಸಮ್ಮೇಳನದ ಶಾಶ್ವತ ನೆನಪಿಗಾಗಿ ಹೊರತರುತ್ತಿರುವ ಸ್ಮರಣ ಸಂಚಿಕೆಗೆ ಧನ ಸಹಾಯವನ್ನು ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸ್ಮರಣ ಸಂಚಿಕೆಯ ಹಿಂಬದಿ ಪುಟದಲ್ಲಿ ವಿಶ್ವವಿದ್ಯಾನಿಲಯದ ಜಾಹೀರಾತನ್ನು ಪ್ರಕಟಿಸುವ ಬಗ್ಗೆ ರೂ.2,00,000.00 (ರೂಪಾಯಿ ಎರಡು ಲಕ್ಷಗಳು ಮಾತ್ರ) ಮೊತ್ತದ ಧನಸಹಾಯವನ್ನು ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಸಾ.ಸ.2:16 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಮಂಗಳಾ ಕ್ಯಾಂಟೀನನ್ನು ಮಂಗಳೂರು ವಿಶ್ವವಿದ್ಯಾನಿಲಯ ಉದ್ಯೋಗಿಗಳ ವಿವಿದೋದ್ದೇಶ ಸಹಕಾರಿ ಸಂಘದ ವತಿಯಿಂದ ನಡೆಸುವ ಪ್ರಸ್ತಾವನೆಯ ಬಗ್ಗೆ.

ನಿರ್ಣಯ: ನಿಯಮಾನುಸಾರವಾಗಿ ಅನುಮೋದಿಸಲಾಯಿತು. ಆದರೆ, ಭಾನುವಾರ ಮತ್ತು ರಜಾದಿನಗಳಲ್ಲಿ ಮಧ್ಯಾಹ್ನ ಗಂಟೆ 2 ರವರೆಗೆ ಕಾರ್ಯನಿರ್ವಹಿಸುವ ಷರತ್ತನ್ನು ಸಂಬಂಧಿತ ಕರಾರು ಪತ್ರದಲ್ಲಿ ನಮೂದಿಸಬೇಕೆಂಬುದಾಗಿಯೂ ನಿರ್ಣಯಿಸಲಾಯತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ:ಸಾ.ಸ.2:17 (2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ, ಗಣಕಯಂತ್ರ ಕೇಂದ್ರದ Networking Device, Wifi Device ಮತ್ತು Firewall ನ ವಾರ್ಷಿಕ ನಿರ್ವಹಣೆಯ ಟೆಂಡರ್ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 22.02.2023ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಕಾನೂನು ಘಟಕ:ಸಾ.ಸ.2:18 (2023)**

ವಿಷಯ: ಶ್ರೀಮತಿ ಮಾಲತಿ. ಡಿ ಶುಶ್ರೂಷಕಿ, ಆರೋಗ್ಯ ಕೇಂದ್ರ ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ 6 ತಿಂಗಳ ಹೆರಿಗೆ ರಜೆ ಮತ್ತು ಹೆರಿಗೆ ರಜೆ ವೇತನವನ್ನು ನೀಡದೇ ಇರುವ ಬಗ್ಗೆ ಇವರ ಪತಿ ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ ಮಂಗಳೂರು ಇವರಿಗೆ (ಸಂಖ್ಯೆ ಕಾ.ಅ.ಮಂ-1/ ಪಿಟಿಎಸ್/ಸಿಆರ್-04/2022-23 ರಲ್ಲಿ) ಸಲ್ಲಿಸಿದ ಮನವಿ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಕಾನೂನು ಘಟಕ:ಸಾ.ಸ.2:19 (2023)**

ವಿಷಯ: ಸರ್ವೋದಯ ಶಿಕ್ಷಣ ಕಾಲೇಜು, ವಿರಾಜಪೇಟೆ, ಕೊಡಗು ಇಲ್ಲಿನ ವಿದ್ಯಾರ್ಥಿಗಳಾದ ಶ್ರೀ ಡಾಲಿನ್ ಜೋಸೆಫ್ ಮತ್ತು ಇಬ್ಬರು ತಮ್ಮ ಬಿ.ಎಡ್. ಪದವಿ ಕಾರ್ಯಕ್ರಮದಲ್ಲಿ ಭೋದನಾ ವಿಷಯವನ್ನು ಬದಲಾಯಿಸುವ ಬಗ್ಗೆ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸೂಕ್ತ ನಿರ್ದೇಶನ ನೀಡುವಂತೆ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ಸಲ್ಲಿಸಿರುವ ರಿಟ್ ಅರ್ಜಿ ಸಂಖ್ಯೆ 23303/2022(EDU)ನ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ:ಸಾ.ಸ.2:20(2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿನ ವಸತಿನಿಲಯಗಳಲ್ಲಿರುವ ವಿದ್ಯಾರ್ಥಿಗಳ ಮನವಿಗೆ ಸಂಬಂಧಿಸಿ ಚರ್ಚಿಸುವ ಕುರಿತು ದಿನಾಂಕ 23.02.2023ರಂದು ನಡೆದ ವಸತಿನಿಲಯಗಳ ಸಲಹಾ ಸಮಿತಿ ಸಭೆಯ ನಡವಳಿಯ ಅನುಮೋದನೆ ಬಗ್ಗೆ.

ನಿರ್ಣಯ: ದಿನಾಂಕ 23.02.2023 ರಂದು ನಡೆದ ವಸತಿನಿಲಯಗಳ ಸಲಹಾ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಪರಿಷ್ಕೃತ ಶುಲ್ಕಗಳನ್ನು ಈ ಕೆಳಗಿನ ತಿದ್ದುಪಡಿಗಳೊಂದಿಗೆ ಅಂಗೀಕರಿಸಿ, ಅನುಮೋದಿಸಲಾಯಿತು.

| | | |
|---|---|---|
| 06 | Sports Fee | 100.00 |
| 07 | Reading Room | 100.00 |
| 08 | Hostel Day | 250.00 |
| 09 | Cultural Activities | 250.00 |
| 11 | Medical Fees | 100.00 |

ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ:ಸಾ.ಸ.2:21(2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಾಂಸ್ಕೃತಿಕ ನೀತಿಯ ಕರಡಿನ ಅಂತಿಮ ಪರಿಶೀಲನೆಗಾಗಿ ವಿಶ್ವವಿದ್ಯಾನಿಲಯದ ಸಾಂಸ್ಕೃತಿಕ ನೀತಿಯ ರಚನಾ ಸಮಿತಿ ಹಾಗೂ ಸಾಂಸ್ಕೃತಿಕ ನೀತಿ ರಚನೆಗೆ ಸಂಬಂಧಿಸಿ ತಜ್ಞರನ್ನೊಳಗೊಂಡ ಪುನರ್ ರಚಿಸಿದ ಉಪಸಮಿತಿ ಸಭೆಯ ನಡವಳಿಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.2:22(2023)**

ವಿಷಯ: ಬೋಧಕರ ಆಂತರಿಕ ವರ್ಗಾವಣೆ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಶ್ರೀ ಟಿ. ರಂಗಪ್ಪ, ಸಹ ಪ್ರಾಧ್ಯಾಪಕರು, ಸಮಾಜಶಾಸ್ತ್ರ ವಿಭಾಗ ಫೀಲ್ಡ್ ಮಾರ್ಷಲ್ ಕೆ,ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಮತ್ತು ಡಾ. ಶಹಬರ್ ಪಾಷ, ಸಹ ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ಫೀಲ್ಡ್ ಮಾರ್ಷಲ್ ಕೆ,ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರುಗಳನ್ನು ಕ್ರಮವಾಗಿ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ಸಮಾಜಶಾಸ್ತ್ರ ಮತ್ತು ರಾಜ್ಯಶಾಸ್ತ್ರ ವಿಭಾಗಳಿಗೆ, ಕೊಡಗು ವಿಶ್ವವಿದ್ಯಾನಿಲಯದ ಸ್ಥಾಪನೆ ಸಂಬಂಧ ಸರಕಾರದ ಆದೇಶಕ್ಕೊಳಪಟ್ಟು ಒಂದು ವರ್ಷ ಅಥವಾ ಮುಂದಿನ ಆದೇಶದವರೆಗೆ ಷರತ್ತುಬದ್ಧವಾಗಿ ನಿಯೋಜನೆ ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.2:23(2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಿರಿಯ ಅಭಿಯಂತರರ ಹುದ್ದೆಗೆ ನೀಡಿರುವ ಮುಂಭಡ್ತಿಯನ್ನು ಪರಿಶೀಲಿಸಲು ರಚಿಸಲಾದ ಸಮಿತಿ ಸಭೆಯ ನಡವಳಿಯ ಬಗ್ಗೆ.

ನಿರ್ಣಯ: ಸಮಿತಿ ಸಭೆಯ ನಡವಳಿಯನ್ನು ಸಿಂಡಿಕೇಟು ಸಭೆಯು ಅಂಗೀಕರಿಸಿತು. ಸದರಿ ನಡವಳಿಯ ಆಧಾರದ ಮೇಲೆ ಈ ಕೆಳಗಿನ ನಿರ್ಣಯವನ್ನು ಸಿಂಡಿಕೇಟು ಕೈಗೊಂಡಿತು.

ಈಗಾಗಲೇ ನೀಡಿರುವ ಮುಂಭಡ್ತಿಯನ್ನು ಸ್ಥಗಿತಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಈ ವಿಷಯವನ್ನು ಮಂಗಳೂರು ವಿಶ್ವವಿದ್ಯಾನಿಲಯದ ನ್ಯಾಯವಾದಿಗಳ ಮುಖಾಂತರ ಮಾನ್ಯ ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯಕ್ಕೆ ನೀಡಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.2:24(2023)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಲಿಯ ನಿರ್ದೇಶಕರನ್ನು ನೇಮಕ ಮಾಡುವ ಬಗ್ಗೆ.

ನಿರ್ಣಯ: ಡಾ. ಮಂಜಯ್ಯ ಡಿ. ಹೆಚ್., ಪ್ರಾಧ್ಯಾಪಕರು, ಸ್ನಾತಕೋತ್ತರ ಗಣಕವಿಜ್ಞಾನ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ನಿಯಮಾನುಸಾರವಾಗಿ ಮುಂದಿನ ಆದೇಶದವರೆಗೆ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಲಿಯ ಪ್ರಭಾರ ನಿರ್ದೇಶಕರನ್ನಾಗಿ ಸರ್ವಾನುಮತದಿಂದ ನೇಮಕ ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಪರೀಕ್ಷಾಂಗ:ಸಾ.ಸ.2:25(2023)**

ವಿಷಯ: ಪರೀಕ್ಷಾ ಫಲಿತಾಂಶಗಳನ್ನು ಶೀಘ್ರವಾಗಿ ನೀಡಲು UUCMS ನಲ್ಲಿ ತಾಂತ್ರಿಕ ಕೆಲಸಗಳಿಗಾಗಿ ಸಿಬ್ಬಂದಿಗಳನ್ನು ನೇಮಕಾತಿ ಮಾಡುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

**ಇತರ ವಿಷಯಗಳು**

1. ಡಾ. ಕರುಣಾಕರ ಎನ್. ವಿ. ಇವರನ್ನು ಖಾಯಂ ನೆಲೆಯಲ್ಲಿ ನೇಮಕಾತಿ ಮಾಡುವ ಬಗ್ಗೆ ಈಗಾಗಲೇ ಸಿಂಡಿಕೇಟು ದಿನಾಂಕ 20.12.2022ರಂದು ನಡೆದ ಸಿಂಡಿಕೇಟು ಸಭೆಯಲ್ಲಿ ನಿರ್ಣಯ ಕೈಗೊಂಡಿದ್ದರೂ ಸದರಿಯವರಿಗೆ ಖಾಯಂಮಾತಿ ಆದೇಶ ನೀಡದಿರುವ ಬಗ್ಗೆ ಸಿಂಡಿಕೇಟು ಸದಸ್ಯರಾಗಿರುವ ಶ್ರೀ ರವಿಚಂದ್ರ ಪಿ.ಎಂ. ಇವರು ಪ್ರಸ್ತಾಪಿಸಲಾಗಿ, ಕುಲಸಚಿವರು ಈ ವಿಷಯದ ಬಗ್ಗೆ ಈಗಾಗಲೇ ಕೈಗೊಂಡಿರುವ ಕ್ರಮಗಳನ್ನು ವಿವರವಾಗಿ ಸಭೆಗೆ ತಿಳಿಸಿದರು. ದಿನಾಂಕ 13.09.2021 ರ ಸಿಂಡಿಕೇಟು ಸಭೆಯ ನಿರ್ಣಯದನುಸಾರ ಈಗಾಗಲೇ ಸರ್ಕಾರಕ್ಕೆ ಪತ್ರ ಬರೆಯಲಾಗಿರುತ್ತದೆ. ಸರಕಾರವು ಕೋರಿರುವ ಅಂಶಗಳಿಗೆ ಸಂಬಂಧಿಸಿ, ವಿಶ್ವವಿದ್ಯಾನಿಲಯದಿಂದ ವಿವರಗಳನ್ನೂ ನೀಡಲಾಗಿರುತ್ತದೆ ಎಂಬ ವಿಷಯವನ್ನು ಕೂಡ ಸಭೆಗೆ ತಿಳಿಸಿದರು. ಮಾನ್ಯ ಉಚ್ಛ ನ್ಯಾಯಾಲದ ಆದೇಶದಲ್ಲಿ ಈ ವಿಷಯದ ಬಗ್ಗೆ ಕಾನೂನಿನ್ವಯ ಕ್ರಮ ಕೈಗೊಳ್ಳುವ ಬಗ್ಗೆ ಆದೇಶಿಸಲಾಗಿರುತ್ತದೆ. ಕುಲಸಚಿವರ ಕಛೇರಿ ಪತ್ರ ದಿನಾಂಕ 22.02.2023ರಲ್ಲಿ ಸದರಿಯವರ ಸೇವಾ ಖಾಯಂಮಾತಿಗೆ ಸಂಬಂಧಿಸಿ, ಸರಕಾರದ ನಿರ್ದೇಶನ ಕೋರಿ ಪತ್ರ ಬರೆಯಲಾಗಿರುವ ಮಾಹಿತಿಯನ್ನು ಮಾನ್ಯ ಕುಲಸಚಿವರು ಸಭೆಗೆ ತಿಳಿಸಿದರು.

2. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ನೆಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಸಿಬ್ಬಂದಿಗಳಿಗೆ ಕಾರ್ಮಿಕ ಇಲಾಖೆಯ ಕಾಯ್ದೆ ಪ್ರಕಾರ ಎಲ್ಲಾ ಸೌಲಭ್ಯಗಳನ್ನು ನೀಡಲು ಕಾನೂನು ಸಲಹೆ ಪಡೆದುಕೊಂಡು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

3. ಶ್ರೀ ರಂಗನಾಥ ಎಂಟರ್‌ಪ್ರೈಸಸ್, ಮೈಸೂರು ಇವರಿಗೆ ಪಾವತಿಗೆ ಬಾಕಿಯಿರುವ ಮೊತ್ತದಲ್ಲಿ ರೂ.2,00,00,000.00 (ರೂಪಾಯಿ ಎರಡು ಕೋಟಿ ಮಾತ್ರ)ವನ್ನು ಶೀಘ್ರದಲ್ಲಿ ಪಾವತಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

4. ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದಲ್ಲಿ ಜಿಮ್ ಇನ್‌ಸ್ಟ್ರಕ್ಟರ್ ಆಗಿ ತಾತ್ಕಾಲಿಕ ನೆಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀ ಗೌರವ ಕುಮಾರ್, ಇವರು ಅತಿಥಿ ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದ ಅರ್ಹತೆಯನ್ನು ಹೊಂದಿದ್ದರೆ ಸದರಿಯವರನ್ನು ಪ್ರಸ್ತುತ ನಿರ್ವಹಿಸುತ್ತಿರುವ ಕೆಲಸ ಕಾರ್ಯಗಳ ಜೊತೆಗೆ ನಿಯಮಾನುಸಾರವಾಗಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ಈ ಸಿಂಡಿಕೇಟು ಸಭೆಯ ದಿನಾಂಕದಿಂದ ಅನ್ವಯವಾಗುವಂತೆ ಬಳಸಿಕೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

5. ಶ್ರೀ ತೌಸಿಫ್ ಅಹಮ್ಮದ್, ಸಂಶೋಧನಾ ವಿದ್ಯಾರ್ಥಿ, ಸ್ನಾತಕೋತ್ತರ ದೈಹಿಕ ಶಿಕ್ಷಣ ಮತ್ತು ಕ್ರೀಡಾ ಅಧ್ಯಯನ ವಿಭಾಗ, ಇವರು ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ವಿದ್ಯಾರ್ಥಿಗಳು ಸದರಿಯವರ ಮೇಲೆ ಮಾಡಿರುವ ಆರೋಪಗಳಿಗೆ ಸಂಬಂಧಿಸಿ ಕೆಲವೊಂದು ವಿವರಣೆಗಳನ್ನು ನೀಡುವಂತೆ ಸಿಂಡಿಕೇಟು ಸದಸ್ಯರಾಗಿರುವ ಶ್ರೀ ರವಿಚಂದ್ರ ಪಿ.ಎಂ. ಇವರು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು. ಅಂತಿಮವಾಗಿ ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಲು ಈ ಕೆಳಗಿನ ಸಮಿತಿಯನ್ನು ರಚಿಸಲಾಯಿತು.

| | |
|---|---|
| 1. ಶ್ರೀ ರವಿಚಂದ್ರ ಪಿ. ಎಂ.<br>ಸಿಂಡಿಕೇಟು ಸದಸ್ಯರು | ಅಧ್ಯಕ್ಷರು |
| 2. ಡಾ. ಬಿ. ಹೆಚ್. ಶೇಖರ್<br>ಪ್ರಾಧ್ಯಾಪಕರು,<br>ಸ್ನಾತಕೋತ್ತರ ಗಣಕ ವಿಜ್ಞಾನ ಅಧ್ಯಯನ ವಿಭಾಗ<br>ಮಂಗಳೂರು ವಿಶ್ವವಿದ್ಯಾನಿಲಯ | ಸದಸ್ಯರು |
| 3. ಡಾ. ಚಂದ್ರ ಎಂ.,<br>ಪ್ರಾಧ್ಯಾಪಕರು,<br>ಸ್ನಾತಕೋತ್ತರ ಜೀವವಿಜ್ಞಾನ ಅಧ್ಯಯನ ವಿಭಾಗ<br>ಮಂಗಳೂರು ವಿಶ್ವವಿದ್ಯಾನಿಲಯ | ಸದಸ್ಯರು |

ವರದಿಯನ್ನು ಶೀಘ್ರವಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.

6. ಗ್ರಂಥಾಲಯ ಸಹಾಯಕರ ಹುದ್ದೆಯಿಂದ ಸಹಾಯಕ ಗ್ರಂಥಪಾಲಕರು ಹುದ್ದೆಯ ಮುಂಭಡ್ತಿಗೆ ಸಂಬಂಧಿಸಿದ ಪರಿನಿಯಮದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಮುಂಭಡ್ತಿ

ಅವಕಾಶವನ್ನು ಕಲ್ಪಿಸಲು ಸೂಕ್ತ ತಿದ್ದುಪಡಿಯನ್ನು ಮಾಡಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

7. ವಿಶ್ವವಿದ್ಯಾನಿಲಯದ ವಿವಿಧ ಕಛೇರಿಗಳ ಕೆಲಸ ಕಾರ್ಯಗಳಲ್ಲಿ ಅಪಾರ ಅನುಭವವಿರುವ ವಿಶ್ವವಿದ್ಯಾನಿಲಯದ ನಿವೃತ್ತ ಸಿಬ್ಬಂದಿಗಳನ್ನು ಆಹ್ವಾನಿಸಿಕೊಂಡು, ವಿಶ್ವವಿದ್ಯಾನಿಲಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ತಾತ್ಕಾಲಿಕ/ಹೊರಗುತ್ತಿಗೆ ಸಿಬ್ಬಂದಿಗಳಿಗೆ ಸೂಕ್ತ ತರಬೇತಿಯನ್ನು ಏರ್ಪಡಿಸಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| ಕುಲಸಚಿವರು | ಕುಲಪತಿಗಳು. |